ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ವಿಭಾಗ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ವಿಷಯ / ವಿಷಯ : DEPARTMENT / SUBJECT: ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE: 21/4/21

ಸಚಿವ ಕೆ.ಎಸ್. ಈಶ್ವರಪ್ಪ ಬಂಡಾಯ ವಿರುದ್ಧ ಮುಖ್ಯಮಂತ್ರಿ ನಿಷ್ಠರ ಆಕ್ರೋಶ

ರಾಜ್ಯ ಸರಕಾರದ ವಿರುದ್ಧ ಕಾಂಗ್ರೆಸ್ ಆಗ್ರಹ, ತೆರೆಮರೆಯ ರೂವಾರಿಗಳ ಮೌನ

ಲೆಟರ್ ವಾರ್ ವಿರುದ್ಧ ಸಿಎಂ ಅಸ್ತ್ರ

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸಚಿವ ಈಶ್ವರಪ್ಪ ಅವರ 'ಲೆಟರ್ ವಾರ್'ಗೆ ಪ್ರತಿಯಾಗಿ ಸಿಎಂ ಯಡಿಯೂರಪ್ಪ ಅವರಿಗೆ ಬೆಂಬಲ ಸೂಚಿಸಿ ಬಿಜೆಪಿ ಶಾಸಕರು ಸಹಿ ಹಾಕಿರುವ ಪತ್ರವನ್ನು ಬೆಳಕಿಗೆ ತರಲಾಗಿದೆ. ಈ ನಡುವೆ ರಾಜ್ಯ ಬಿಜೆಪಿ ಉಸ್ತುವಾರಿ ಅರುಣ್ ಸಿಂಗ್ ಮತ್ತು ಸಂಪುಟದ ಇತರ ಸದಸ್ಯರು ಈಶ್ವರಪ್ಪ ದೂರಿನ ವಿಚಾರದಲ್ಲಿ ಆಕ್ಷೇಪಿಸಿದ್ದಾರೆ. ಈ ನಡುವೆಯೂ ಬಿಜೆಪಿಯ 'ಕರೆಮರೆಯ ವೀರರ' ಮೌನ ಬೇರೆಯದೇ ಸಂದೇಶ ರವಾನಿಸುವಂತಿದೆ!

ತಾವು ನಿರ್ವಹಿಸುವ ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಸಿಎಂ ಹಸ್ತಕ್ಷೇಪ ಮಾಡಿರುವುದಾಗಿ ರಾಜ್ಯಪಾಲರಿಗೆ ದೂರು ಸಲ್ಲಿಸಿ ಹೊರು ಜಿಲ್ಲೆ ಶಿವಮೊಗ್ಗಕ್ಕೆ ಈಶ್ವರಪ್ಪ ಹರಳಿದ್ದಾರೆ. ಅವರ ಹೇಳಿಕೆಯನ್ನು ಸಂಪುಟದ ಯಾವ ಸಚಿವರೂ ಅನುಮೋದಿಸಿಲ್ಲ. ಶಾಸಕರೂ ಈಶ್ವರಪ್ಪ ಧ್ವನಿಗೆ ಸಮಾಹ ಕೋರಿಲ್ಲ. ಇದೆಲ್ಲವೂ ಮೇಲ್ನೋಟಕ್ಕೆ ಕಾಣುತ್ತಿದೆ. ಆದರೆ, ಈಶ್ವರಪ್ಪ ಅವರಿಗೂ ತೆರೆಮರೆಯಲ್ಲಿ ಪ್ರಭಾವಿಗಳ ಬೆಂಬಲವಿದೆ ಎನ್ನಲಾಗಿದೆ.

ಸಚಿವರು, ಶಾಸಕರು ಆಷಾಢಕ್ಕೆ ಇಳಿದು ಸಿಎಂ ಅವರನ್ನು ಸಮರ್ಥಿಸಿಕೊಂಡಿದ್ದಾರೆ. ಗ್ರಾಮೀಣಾಭಿವೃದ್ಧಿ ಇಲಾಖೆಯ ಅನುದಾನ ಬಾರದ ಬಗ್ಗೆ ಇತ್ತೀಚೆಗೆ ಆಡಳಿತಾರೂಢ ಬಿಜೆಪಿ ಶಾಸಕರು ಸಿಎಂಗೆ ದೂರು ನೀಡಿದ್ದರು. ಈಶ್ವರಪ್ಪ ಅವರನ್ನೇ ಗುರಿಯಾಗಿಸಿಕೊಂಡಿದ್ದ ಈ ಪತ್ರಕ್ಕೆ 50ಕ್ಕೂ ಹೆಚ್ಚು ಶಾಸಕರು ಸಹಿ ಹಾಕಿದ್ದರು. ಆ ಪತ್ರವೀಗ ಜೂರಬಿದ್ದಿದೆ. ಇದರೊಂದಿಗೆ ಲೆಟರ್ ವಾರ್ ಪ್ರಾರಂಭಿಸಿರುವ ಈಶ್ವರಪ್ಪ ಅವರನ್ನು ಕಟ್ಟಿ ಹಾಕಲು ಈ ರೀತಿ ಪ್ರಹ್ಮಾಸ್ತ್ರ ನೀಡಲಾಗಿದೆ ಎನ್ನುವುದು ಸ್ಪಷ್ಟವಾದಂತಾಗಿದೆ.

ಇದರ ಮಧ್ಯೆ ಸಿಎಂ ರಾಜೀನಾಮೆಗೆ ಪ್ರತಿಪಕ್ಷ ಕಾಂಗ್ರೆಸ್ ಆಗ್ರಹಿಸಿದೆ. ರಾಜ್ಯದಲ್ಲಿ ಆಡಳಿತ ಕುಸಿದು ಬಿದ್ದಿರುವುದರಿಂದ ರಾಜ್ಯಪಾಲರು ಮಧ್ಯ ಪ್ರವೇಶಿಸಿ ರಾಷ್ಟ್ರಪತಿ ಆಳ್ವಿಕೆಗೆ ಶಿಫಾರಸು ಮಾಡಬೇಕು ಎಂದು ಕಾಂಗ್ರೆಸ್ ನಾಯಕರು ಒತ್ತಾಯಿಸಿದ್ದಾರೆ.

ಗ್ರಾಮೀಣಾಭಿವೃದ್ಧಿ ಇಲಾಖೆ ಬಗ್ಗೆ ರಾಜ್ಯಪಾಲರೊಂದಿಗೆ ಚರ್ಚೆ ಮಾಡಬೇಕಿತ್ತು. ಹೀಗಾಗಿ ಅವರನ್ನು ಭೇಟಿ ಮಾಡಿದ್ದೇನೆ. ಅವರಿಗೆ ಪತ್ರ ಬರೆದಿರುವುದರಲ್ಲಿ ವಿಶೇಷವೇನಿಲ್ಲ. ಅದಕ್ಕೆ ಇಷ್ಟೊಂದು ಮಹತ್ವ ಕೊಡುವ ಅವಶ್ಯಕತೆ ಇಲ್ಲ.
-ಕೆ.ಎಸ್.ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಸಚಿವ

ಈಶ್ವರಪ್ಪ ಅವರಿಗೆ ಏನೇ ಭಿನ್ನಾಭಿಪ್ರಾಯ ವಿದ್ದರೂ ಸಿಎಂ ಬಳಿ ಮಾತನಾಡಿ ಬಗೆಹರಿಸಿಕೊಳ್ಳಬೇಕಿತ್ತು. ಅದನ್ನು ಬಿಟ್ಟು ರಾಜ್ಯಪಾಲರಿಗೆ ಪತ್ರ ಬರೆದದ್ದು ಸರಿಯಲ್ಲ.
-ಆರುಣ್ ಸಿಂಗ್
ರಾಜ್ಯ ಬಿಜೆಪಿ ಉಸ್ತುವಾರಿ

ಈಶ್ವರಪ್ಪ ಅವರೋಪ ಗಂಭೀರ ಸ್ವರೂಪದ್ದು. ಅಡಳಿತ ಕುಸಿದಿರುವುದಕ್ಕೆ ಇದು ಸಾಕ್ಷಿ. ರಾಜ್ಯಪಾಲರು ತಕ್ಷಣ ಮಧ್ಯೆ ಪ್ರವೇಶಿಸಿ ಸಿಎಂ ಅವರನ್ನು ವಜಾಗೊಳಿಸಿ, ರಾಷ್ಟ್ರಪತಿ ಆಡಳಿತಕ್ಕೆ ಶಿಫಾರಸು ಮಾಡಲಿ.
-ಸಿದ್ದರಾಮಯ್ಯ, ಪ್ರತಿಪಕ್ಷದ ನಾಯಕ

ಈಶ್ವರಪ್ಪ ಲೆಟರ್ ವಾರ್‌ಗೆ ಬಿಜೆಪಿ ವಲಯದಲ್ಲೂ ತೀವ್ರ ಅಕ್ಷೇಪ ಕೇಳಿ ಬರುತ್ತಿದೆ. ಉಪ ಚುನಾವಣೆ ಸಂದರ್ಭದಲ್ಲಿ ಇಂತಹ ಗೊಂದಲ ಸೃಷ್ಟಿಸುವುದು ಬೇಡವೆಂದು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಪ್ರಶ್ನಿಸುತ್ತಿದ್ದಾರೆ. ಬೈ ಎಲೆಕ್ಷನ್ ಇರುವಾಗ ಈಶ್ವರಪ್ಪ ಪತ್ರ ಸಂದೇಶ ನೀಡಲು ಹೊರಟಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರು, ಪ್ರಧಾನಿ ಸೇರಿದಂತೆ ಪಕ್ಷದ ರಾಜ್ಯ ಉಸ್ತುವಾರಿಗೂ ಪತ್ರ ಬರೆದಿದ್ದಾಗಿ ಹೇಳಿಕೊಂಡಿದ್ದಾರೆ. ಆದರಿಂದ ಪ್ರತಿಕ್ರಿಯೆ ಬರುವ ಮುನ್ನವೇ ರಾಜ್ಯಪಾಲರ ಮೊರೆ ಹೋಗಿದ್ದೇಕೆ ಎಂಬ ಮಾತು ಕೇಳಿ ಬರುತ್ತಿದೆ.

ಈ ಬೆಳವಣಿಗೆ ಬಗ್ಗೆ ರಾಜ್ಯ ಬಿಜೆಪಿ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ಕಡೆಯಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಉಸ್ತುವಾರಿ ಅರುಣ್ ಸಿಂಗ್ ಹೇಳಿಕೆಯನ್ನು ಪಕ್ಷದ ಮಾಧ್ಯಮ ಘಟಕ ಬಿಡುಗಡೆ ಮಾಡಿದೆ. ಇದರ ಹೊರತಾಗಿ ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಸೇರಿದಂತೆ 'ಹಿರಿಯ ತಲೆಗಳು' ಪ್ರತಿಕ್ರಿಯಿಸಿಲ್ಲ.

ಸಮ್ಮಿಶ್ರ ಕೋರಿಕೆ ಆಲಿಸಿ ಆಗತ್ಯ ಅನುದಾನ ನೀಡಿದ್ದೀರಿ. ಪ್ರವಾಹ ಬಂದಾಗಲೂ ಕ್ರಮ ಕೈಗೊಂಡಿದ್ದೀರಿ. 2019-20ರಲ್ಲಿ ಗ್ರಾಮೀಣಾಭಿವೃದ್ಧಿ ಲೋಕೋಪಯೋಗಿ, ನಗರಾಭಿವೃದ್ಧಿ ಇಲಾಖೆಯಿಂದ ಪ್ರತಿ ಕ್ಷೇತ್ರಕ್ಕೆ 25 ಕೋಟಿ ರೂ. ಬಿಡುಗಡೆ ಮಾಡಿದ್ದೀರಿ.

ಕೊರೊನಾದಿಂದ ಆರ್ಥಿಕತೆಗೆ ಹಿನ್ನಡೆಯಾಗಿದೆ. ಈ ನಡುವೆಯೂ 125 ಕ್ಷೇತ್ರಗಳಿಗೆ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ 1,313 ಕೋಟಿ ರೂ. ಬಿಡುಗಡೆಗೆ ಅನುಮೋದನೆ ನೀಡಿದ್ದೀರಿ. ಆದರೆ, ಈ ಕಾಮಗಾರಿಗಳಿಗೆ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಅನುಮೋದನೆ ನೀಡದಿರುವುದರಿಂದ ಕರಸ ಕೈಗತ್ತಿಕೊಳ್ಳಲು ಸಾಧ್ಯವಾಗಿಲ್ಲ.

ಈ ಕಾಮಗಾರಿ ಕೈಗತ್ತಿಕೊಂಡರೆ ಸರಕಾರದ ಬಗ್ಗೆ ಗ್ರಾಮೀಣ ಜನರಲ್ಲಿ ಒಳ್ಳೆಯ ಅಭಿಪ್ರಾಯ ಮೂಡುತ್ತದೆ. ಪಂಚಾಯತಿ ಚುನಾವಣೆಯಲ್ಲೂ ಉತ್ತಮ ಫಲಿತಾಂಶ ನಿರೀಕ್ಷಿಸಬಹುದು.